## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 1089 (1168) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 21.08.2025 |
| ಉತ್ತರಿಸಬೇಕಾದವರು | : | ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ತಳವಾರ ಮತ್ತು ಪರಿವಾರ ಸಮುದಾಯದವರನ್ನು ಕೇಂದ್ರ ಸರ್ಕಾರ ಮಾರ್ಚ್ 2020ರಲ್ಲಿ ಪರಿಶಿಷ್ಟ ಪಂಗಡ ಜಾತಿಗೆ ಸೇರಿಸಿ ಅಧಿಸೂಚನೆ ಹೊರಡಿಸಿರುವುದು ನಿಜವೇ; | ಹೌದು.<br><br>ಕೇಂದ್ರ ಸರ್ಕಾರದ ಅಧಿಸೂಚನೆ ಸಂಖ್ಯೆ:04 OF 2020 ದಿನಾಂಕ:19.03.2020 ರಲ್ಲಿ An Act further to amend the Constitution (Scheduled Tribes) Order, 1950, to modify the list of the Scheduled Tribes in the state of Karnataka ರಲ್ಲಿ ಪ್ರಕಟಿಸಿದೆ. |
| ಆ) | ಇದ್ದಲ್ಲಿ, ಸದರಿ ಅಧಿಸೂಚನೆಯನ್ವಯ ರಾಜ್ಯದಲ್ಲಿ ತಳವಾರ ಮತ್ತು ಪರಿವಾರ ಸಮುದಾಯದವರಿಗೆ ಪರಿಶಿಷ್ಟ ಪಂಗಡ ಜಾತಿ ಪ್ರಮಾಣ ಪತ್ರ ನೀಡಲು ಇರುವ ಗೊಂದಲಗಳೇನು; | ಭಾರತ ಸರ್ಕಾರದ ಗೆಜೆಟ್ ಅಧಿಸೂಚನೆ ದಿನಾಂಕ:19.03.2020 ರನ್ವಯ ರಾಜ್ಯ ಸರ್ಕಾರದ ಸುತ್ತೋಲೆ ಸಂಖ್ಯೆ:ಸಕಇ 23 ಎಸ್ ಎಡಿ 2009 ದಿನಾಂಕ:06.06.2020, ಸುತ್ತೋಲೆ ಸಂಖ್ಯೆ:ಸಕಇ 23 ಎಸ್ ಎಡಿ 2009 ದಿನಾಂಕ:31.08.2020, CIRCULAR NO. SWD 180 SAD 2020 (P) DATED:29.01.2022 ಮತ್ತು ಸುತ್ತೋಲೆ ಸಂಖ್ಯೆ:STW/SECB/STP/315/2024 ದಿನಾಂಕ:07.02.2025ರ ಸರ್ಕಾರದ ಸುತ್ತೋಲೆಗಳಲ್ಲಿ ಪರಿಶಿಷ್ಟ ಪಂಗಡದ NAIKDA, NAYAKA ಸಮುದಾಯದ ಪರ್ಯಾಯ ಪದ (SYNONYM) ಜಾತಿಗಳಾದ PARIVARA ಮತ್ತು TALAWARA ಜಾತಿಗಳಿಗೆ ಕರ್ನಾಟಕ ಅನುಸೂಚಿತ ಜಾತಿಗಳೂ, ಅನುಸೂಚಿತ ಬುಡಕಟ್ಟುಗಳು ಮತ್ತು ಇತರೆ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) ಅಧಿನಿಯಮ 1990 ಮತ್ತು ನಿಯಮಗಳು 1992 ರನ್ವಯ ಪರಿಶಿಷ್ಟ ಪಂಗಡದ ಜಾತಿ ಪ್ರಮಾಣ ಪತ್ರ ನೀಡುವ ಪ್ರಾಧಿಕಾರವಾಗಿರುವ ಆಯಾ ತಾಲ್ಲೂಕಿನ ತಹಶೀಲ್ದಾರರು ಜಾತಿ ಪ್ರಮಾಣ ಪ್ರಮಾಣ ಪತ್ರ ನೀಡುವಾಗ ಪಾಲಿಸಬೇಕಾಗಿರುವ ಕಾರ್ಯವಿಧಾನವನ್ನು ಕಡ್ಡಾಯವಾಗಿ ಪಾಲಿಸಿ ಪರಿಶಿಷ್ಟ ಪಂಗಡದ ಜಾತಿಗೆ ಸೇರಿದ ತಳವಾರ ಮತ್ತು ಪರಿವಾರ ಜಾತಿಗಳಿಗೆ ಯಾವುದೇ ತೊಂದರೆಯಾಗದಂತೆ ಹಾಗೂ ನಿಗಧಿತ ಅವಧಿಯೊಳಗೆ ಜಾತಿ ಪ್ರಮಾಣ ಪತ್ರವನ್ನು ನೀಡುವಂತೆ ಸಂಬಂಧಿಸಿದ ಪ್ರಾಧಿಕಾರಿಗಳಿಗೆ ಸೂಚಿಸಲಾಗಿದೆ. |
| ಇ) | ಈ ಗೊಂದಲಗಳನ್ನು ನಿವಾರಣೆ ಮಾಡಿ ಅರ್ಹ ತಳವಾರ ಮತ್ತು ಪರಿವಾರ ಸಮುದಾಯದವರಿಗೆ ಕೂಡಲೇ ಪರಿಶಿಷ್ಟ ಪಂಗಡದ ಜಾತಿ ಪ್ರಮಾಣ ಪತ್ರ ನೀಡಲು ಕ್ರಮ ಕೈಗೊಳ್ಳಲಾಗುವುದೇ? | |

**STW/SECB/SAD/87/2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ